ಸನ್ನಡತೆ ಆಧಾರದ ಮೇಲೆ ಖೈದಿಗಳ ಬಿಡುಗಡೆ

1290(1574); ಶ್ರೀ ಕೋನರೆಡ್ಡಿ ಎನ್.ಎಚ್ (ನವಲಗುಂದ)

ಅ) ರಾಜ್ಯದಲ್ಲಿ ವಿವಿಧ ಶಿಕ್ಷೆಗಳಿಗೆ ಗುರಿಯಾಗಿ ಸೆರೆವಾಸ ಅನುಭವಿಸುತ್ತಿರುವ ಖೈದಿಗಳನ್ನು ಕೊನೆಯದಾಗಿ ಯಾವ ವರ್ಷದಲ್ಲಿ ಎಷ್ಟು ಜನರನ್ನು ಸನ್ನಡತೆ ಆಧಾರದ ಮೇಲೆ ಬಿಡುಗಡೆ ಮಾಡಲಾಗಿದೆ; (ವಿವರ ನೀಡುವುದು)

ಆ) ಹಾಗಿದ್ದಲ್ಲಿ, ಸನ್ನಡತೆ ಆಧಾರದ ಮೇಲೆ ಸೆರೆವಾಸ ಅನುಭವಿಸುತ್ತಿರುವ ಖೈದಿಗಳನ್ನು ಬಿಡುಗಡೆ ಮಾಡುವಾಗ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು;

ಇ) ಪ್ರಸಕ್ತ ಸಾಲಿನಲ್ಲಿ ಸನ್ನಡತೆ ಆಧಾರದ ಮೇಲೆ ಸೆರೆವಾಸ ಅನುಭವಿಸುತ್ತಿರುವ ಖೈದಿಗಳನ್ನು ಬಿಡುಗಡೆ ಮಾಡಲು ಸರ್ಕಾರ ಖೈದಿಗಳನ್ನು ಗುರುತಿಸಿದೆಯೇ;

ಈ) ಹಾಗಿದ್ದಲ್ಲಿ, ಸನ್ನಡತೆ ಆಧಾರದ ಮೇಲೆ ಸೆರೆವಾಸ ಅನುಭವಿಸುತ್ತಿರುವ ಎಷ್ಟು ಖೈದಿಗಳನ್ನು ಗುರುತಿಸಿ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)

ಅ) 2006ನೇ ಸಾಲಿನಲ್ಲಿ ಕಾರಾಗೃಹಗಳಲ್ಲಿ ವಿವಿಧ ಶಿಕ್ಷೆಗಳಿಗೆ ಗುರಿಯಾಗಿ ಜೈಲು ಶಿಕ್ಷೆ ಅನುಭವಿಸುತ್ತಿರುವ 309 ಶಿಕ್ಷಾ ಬಂದಿಗಳನ್ನು ಸನ್ನಡತೆ ಆಧಾರದ ಮೇಲೆ ಬಿಡುಗಡೆ ಮಾಡಲಾಗಿದೆ.

ಆ) ಪ್ರಸ್ತುತ ಮಾಫಿ ಸೇರಿದಂತೆ 14 ವರ್ಷ ಮತ್ತು ಮೇಲ್ಪಟ್ಟು ಶಿಕ್ಷೆ ಪೂರೈಸಿರುವ ಜೀವಾವಧಿ ಶಿಕ್ಷಾ ಬಂದಿಗಳನ್ನು ಅಕಾಲಿಕವಾಗಿ ಬಿಡುಗಡೆ ಮಾಡಲು ಸರ್ಕಾರವು ಮಾರ್ಗಸೂಚಿಗಳನ್ನು ರಚಿಸಿದೆ.

ಇ) ಹೌದು.

ಈ) ದಿನಾಂಕ 26–01–2014ರ ಅಂತ್ಯಕ್ಕೆ ಮಾಫಿ ಸೇರಿದಂತೆ 14 ವರ್ಷ ಮತ್ತು ಮೇಲ್ಪಟ್ಟು ಶಿಕ್ಷೆ ಪೂರೈಸಿರುವ 441 ಜೀವಾವಧಿ ಶಿಕ್ಷಾ ಬಂದಿಗಳನ್ನು ಬಿಡುಗಡೆಗೊಳಿಸಲು ಪರಿಶೀಲಿಸಲಾಗುತ್ತಿದೆ.

ಪೊಲೀಸ್ ವಸತಿ ಗೃಹಗಳು

1292(1898); ಶ್ರೀ ಕೃಷ್ಣಪ್ಪ ಎಂ.ಟಿ. (ತುರುವೆಕೆರೆ)

ಅ) ತುರುವೇಕೆರೆ ಪಟ್ಟಣದಲ್ಲಿ ಪೊಲೀಸ್ ವಸತಿ ಗೃಹಗಳು ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ತುರುವೇಕೆರೆ ಪಟ್ಟಣದಲ್ಲಿ ಪೊಲೀಸ್ ವಸತಿ ಗೃಹ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿವೆಯೇ;

ಇ) ಹಾಗಿದ್ದಲ್ಲಿ, ಯಾವಾಗ ನಿರ್ಮಾಣ ಮಾಡಲಾಗುವುದು?

ಶ್ರೀ ಕೆ.ಜೆ. ಜಾರ್ಜ್ (ಗೃಹ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಮತ್ತು ಇ) ತುರುವೇಕೆರೆ ಪಟ್ಟಣದಲ್ಲಿ ಈಗಾಗಲೇ 22 ವಸತಿಗೃಹಗಳು ಲಭ್ಯವಿರುತ್ತವೆ. ನೂತನವಾಗಿ 06 ವಸತಿಗೃಹಗಳ ನಿರ್ಮಾಣ ಕಾಮಗಾರಿಯು ಪ್ರಗತಿಯ ಹಂತದಲ್ಲಿವೆ.

ಕಾಲುಬಾಯಿ ರೋಗ

1293(1397); ಶ್ರೀ: ಕ್ಯಾತಸಂದ್ರ ಎನ್ ರಾಜಣ್ಣ (ಮಧುಗಿರಿ)

ಅ) ಮಧುಗಿರಿ ತಾಲ್ಲೂಕಿನಲ್ಲಿ ಕಾಲುಬಾಯಿ ರೋಗದಿಂದ ಮೃತಪಟ್ಟ ಜಾನುವಾರುಗಳ ಸಂಖ್ಯೆ ಎಷ್ಟು;

ಆ) ಹಾಗಿದ್ದಲ್ಲಿ ಮೃತಪಟ್ಟ ಜಾನುವಾರುಗಳ ಮಾಲೀಕರಿಗೆ ಪರಿಹಾರ ನೀಡಲಾಗಿದೆಯೇ (ವಿವರ ನೀಡುವುದು)